ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 19ನೇ ಸೆಪ್ಟೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಸಿದ್ದರಾಮಯ್ಯ, ಯು.ಟಿ. ಅಬ್ದುಲ್ ಖಾದರ್, ಕೆ.ಆರ್. ರಮೇಶ್ ಕುಮಾರ್, ಕೃಷ್ಣ ಬೈರೇಗೌಡ, ಡಾ. ಅಜಯ ಧರ್ಮಸಿಂಗ್, ಪ್ರಿಯಾಂಕ ಖರ್ಗೆ, ಹಾಗೂ ಇತರರು ಮತ್ತು ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ವೆಂಕಟರಾವ್ ನಾಡಗೌಡ, ಸಿ.ಎನ್. ಬಾಲಕೃಷ್ಣ, ಎಂ. ಅಶ್ವಿನ್ ಕುಮಾರ್, ಕೆ.ಎಸ್. ಲಿಂಗೇಶ್ ಹಾಗೂ ಇತರರು – ರಾಜ್ಯದಲ್ಲಿ ಪ್ರವಾಹ ಮತ್ತು ಅತಿವೃಷ್ಟಿಯ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

3. ಶಾಸನ ರಚನೆ

I.ವಿಧೇಯಕವನ್ನು ಮಂಡಿಸುವುದು

ಡಾ. ಅಶ್ವಥ್ ನಾರಾಯಣ ಸಿ.ಎನ್. (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–

ಅ) 2022ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

... 2/

II.ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**
   - ಅ) 2022ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**
   - ಅ) 2022ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**
   - ಅ) 2022ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**
   - ಅ) 2022ನೇ ಸಾಲಿನ ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. **ಶ್ರೀ ಎನ್. ನಾಗರಾಜ (ಎಂಟಿಬಿ) (ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು) ಅವರು:–**
   - ಅ) 2022ನೇ ಸಾಲಿನ ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. **ಡಾ. ನಾರಾಯಣಗೌಡ (ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು) ಅವರು:–**
   - ಅ) 2022ನೇ ಸಾಲಿನ ಕರ್ನಾಟಕ ರೇಷ್ಮೆಹುಳುಬಿತ್ತನೆ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ವಿತರಣೆ ಮತ್ತು ಮಾರಾಟ ವಿನಿಯಮನ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   - ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

III. ವಿಧೇಯಕವನ್ನು ಹಿಂಪಡೆಯುವುದು

ಶ್ರೀ ಅರಬೈಲ್ ಹೆಬ್ಬಾರ ಶಿವರಾಮ (ಮಾನ್ಯ ಕಾರ್ಮಿಕ ಸಚಿವರು) ಅವರು:–

ಅ) 2020ನೇ ಸಾಲಿನ ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಹಿಂಪಡೆಯುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಕೃಷ್ಣಬೈರೇಗೌಡ, ಎ.ಟಿ. ರಾಮಸ್ವಾಮಿ ಮತ್ತು ಈಶ್ವರ್ ಭೀಮಣ್ಣ ಖಂಡ್ರೆ ಇವರುಗಳು –** ಬೆಂಗಳೂರು ನಗರ ಜಿಲ್ಲೆಯ ಲಗ್ಗೆರೆ ಗ್ರಾಮದಲ್ಲಿ ನಗರ ಭೂ ಮಿತಿ (Urban Land Ceiling) ಕಾನೂನಿನ ಅಡಿ ಕಳೆದುಕೊಂಡ ಭೂಮಿಯ ವಿಸ್ತೀರ್ಣದ ಬಗ್ಗೆ ಸುಳ್ಳು ಮಾಹಿತಿಗಳನ್ನು ನೀಡಿ, ಭಾರಿ ಪ್ರಮಾಣದ ಲಾಭವನ್ನು ಮಾಡಿಕೊಂಡಿರುವವರ ಹಾಗೂ ಇದಕ್ಕೆ ಸಹಕರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

2) **ಶ್ರೀಯುತರುಗಳಾದ ಸಿದ್ದರಾಮಯ್ಯ, ಆರ್.ವಿ. ದೇಶಪಾಂಡೆ, ಯು.ಟಿ. ಅಬ್ದುಲ್ ಖಾದರ್, ಡಾ. ಅಜಯ ಧರ್ಮಸಿಂಗ್, ಹೆಚ್.ಕೆ. ಪಾಟೀಲ, ಕೆ.ಆರ್. ರಮೇಶ್ ಕುಮಾರ್, ಡಾ. ಅಂಜಲಿ ಹೇಮಂತ್ ನಿಂಬಾಳ್ಕರ್ ಹಾಗೂ ಇತರರು –** ಪೊಲೀಸ್ ನೇಮಕಾತಿಯಲ್ಲಿನ ಅಕ್ರಮಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಆರ್.ವಿ. ದೇಶಪಾಂಡೆ, ಯು.ಟಿ. ಅಬ್ದುಲ್ ಖಾದರ್, ಡಾ. ಅಜಯ ಧರ್ಮಸಿಂಗ್, ರಿಜ್ವಾನ್ ಅರ್ಷದ್ ಮತ್ತು ರಾಮಲಿಂಗಾರೆಡ್ಡಿ ಅವರುಗಳು –** ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯಲ್ಲಿ ಫಲವತ್ತಾದ ಭೂಮಿಯನ್ನು ಕೆ.ಐ.ಎ.ಡಿ.ಬಿ.ಯು ಭೂಸ್ವಾಧೀನ ಪ್ರಕ್ರಿಯೆ ನಡೆಸಿದ್ದು, ಇದರಿಂದ ರೈತರಿಗೆ ತೊಂದರೆಯಾಗುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

2) **ಶ್ರೀ ಕೆ.ಜಿ. ಬೋಪಯ್ಯ ಮತ್ತು ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ ಅವರುಗಳು** – ಕೊಡಗು ಜಿಲ್ಲೆಯಲ್ಲಿ ಮಾಜಿ ಸೈನಿಕರಿಗೆ ಕೃಷಿ ಜಮೀನನ್ನು ಮಂಜೂರಾತಿ ಮಾಡಲು ತಕ್ಷಣ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ವೆಂಕಟರಾವ್ ನಾಡಗೌಡ ಮತ್ತು ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ ಅವರುಗಳು –** ಕಳೆದ ಸಾಲಿನಲ್ಲಿ ಖರ್ಚಾಗದೇ ಉಳಿದಿರುವ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನವನ್ನು ಅದೇ ಕ್ಷೇತ್ರದ ಶಾಸಕರಿಗೆ ಮಂಜೂರು ಮಾಡುವ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

4) **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು –** ಕೇರಳ, ತೆಲಂಗಾಣ, ತಮಿಳುನಾಡು ರಾಜ್ಯಗಳಲ್ಲಿ ಇರುವಂತೆ ಪೊಲೀಸ್ ಉದ್ಯೋಗಕ್ಕೆ ಸೇರುವ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು ರಾಜ್ಯದಲ್ಲಿಯೂ ಸಹ ಗರಿಷ್ಠ 31 ವರ್ಷಕ್ಕೆ ಹೆಚ್ಚಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು –** ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕು ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಕೇವಲ ನಿಯೋಜನೆ, ಅನ್ಯ ಕರ್ತವ್ಯ ಹಾಗೂ ಹೊರಗುತ್ತಿಗೆ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುವುದರಿಂದ ರೈತರಿಗೆ ಕೃಷಿ ಇಲಾಖೆಯ ಮಾಹಿತಿ ಸೌಲಭ್ಯಗಳನ್ನು ತಲುಪಿಸಲು ಕಷ್ಟಕರವಾಗುತ್ತಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

6) **ಶ್ರೀ ದಿನಕರ ಕೇಶವ ಶೆಟ್ಟಿ ಅವರು –** ಕುಮಟಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮಂಜುಗುಣಿ ಗ್ರಾಮದಿಂದ ಗಂಗಾವಳಿ ಗ್ರಾಮಕ್ಕೆ ಅಘನಾಶಿನಿ ನದಿಗೆ ಅಡ್ಡಲಾಗಿ ಹೊನ್ನಾವರ–ಕೊತಿಗಾಳ ಹಾಗೂ ಕೊಡಕಣಿ–ಐಗಳಕುರವೆ ಹತ್ತಿರ ಕೆ.ಅರ್.ಡಿ.ಸಿ.ಎಲ್ ವತಿಯಿಂದ ನಿರ್ಮಿಸುತ್ತಿರುವ ಸೇತುವೆ ನಿರ್ಮಾಣ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎಸ್.ಎನ್. ನಾರಾಯಣ ಸ್ವಾಮಿ ಕೆ.ಎಂ. ಅವರು –** ರಾಜ್ಯದಲ್ಲಿ ವಾಸದ ಬಡಾವಣೆ/ವಾಣಿಜ್ಯ ಬಡಾವಣೆ/ಕೈಗಾರಿಕಾ ವಲಯ/ವಸತಿ ಸಮುಚ್ಚಯ ಹಾಗೂ ಗಾಲ್ಫ್ ರೆಸಾರ್ಟ್‌ಗಳ ಮಧ್ಯಭಾಗದಲ್ಲಿ ಸಿಲುಕಿರುವ ಸರ್ಕಾರಿ "ಬಿ" ಖರಾಬು ಜಮೀನುಗಳನ್ನು ಮಾರುಕಟ್ಟೆ ಬೆಲೆಗೆ ನಿಗದಿ ಮಾಡಿ, ಆಯಾ ಮಾಲೀಕರಿಗೆ ಕ್ರಯಕ್ಕೆ ಕೊಡಲು/ಸಕ್ರಮಗೊಳಿಸುವ ಬಗ್ಗೆ ಹಾಗೂ ಬಂಗಾರಪೇಟೆ ತಾಲ್ಲೂಕಿನಲ್ಲಿ ಕಾನ್ಫಿಡೆಂಟ್ ಪ್ರಾಜೆಕ್ಟ್ (ಜಿಯಾನ್ ಹಿಲ್ಸ್) ಗಾಲ್ಫ್ ಪ್ರಾಜೆಕ್ಟ್‌ನ ಮಧ್ಯಭಾಗದಲ್ಲಿರುವ "ಬಿ" ಖರಾಬು ಜಮೀನುಗಳನ್ನು ಸಕ್ರಮಗೊಳಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎಂ.ವಿ. ವೀರಭದ್ರಯ್ಯ ಅವರು –** ಮಧುಗಿರಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ದೊಡ್ಡೇರಿ ಹಾಗೂ ಕಸಬಾ ಹೋಬಳಿಯ ಹಲವು ಗ್ರಾಮಗಳಲ್ಲಿ ಕೈಗಾರಿಕಾ ಉದ್ದೇಶಕ್ಕಾಗಿ ಕೆ.ಐ.ಎ.ಡಿ.ಬಿ. ವತಿಯಿಂದ ಭೂಸ್ವಾಧೀನಪಡಿಸಿಕೊಂಡಿರುವ ರೈತರ ಪ್ರತಿ ಎಕರೆ ಜಮೀನಿಗೆ ನಿಗದಿಪಡಿಸಿರುವ ಪರಿಹಾರ ಮೊತ್ತವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

9) **ಶ್ರೀ ಅಭಯ ಪಾಟೀಲ ಅವರು –** ಬೆಳಗಾವಿಯಲ್ಲಿರುವ ಸುವರ್ಣ ಸೌಧದ ಮುಂಭಾಗದ ಪ್ರದೇಶದಲ್ಲಿ ಶ್ರೀ ಸಂಗೊಳ್ಳಿ ರಾಯಣ್ಣ ಅವರ ಪುತ್ಥಳಿಯನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

10) **ಡಾ. ಹೆಚ್.ಡಿ. ರಂಗನಾಥ್ ಅವರು –** ಸರ್ಕಾರಿ ವಸತಿಯುತ ಕಿವುಡ ಮತ್ತು ಮೂಕ ಮಕ್ಕಳ ಶಾಲೆಯ ವಿಶೇಷ ಶಿಕ್ಷಕರ ಜೇಷ್ಠತೆ ನಿಗದಿಗೊಳಿಸಿ, ಪಿಂಚಣಿ ನೀಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

11) **ಶ್ರೀ ಹೆಚ್. ಹಾಲಪ್ಪ ಹರತಾಳು ಅವರು –** ಮಲೆನಾಡಿನ ಪ್ರದೇಶಗಳಲ್ಲಿ ಅತಿವೃಷ್ಟಿಯಿಂದಾಗಿ ಅಡಿಕೆ ತೋಟಗಳಲ್ಲಿ ಎಲೆಚುಕ್ಕಿರೋಗ ಮತ್ತು ಕೊಳೆರೋಗ ವ್ಯಾಪಕವಾಗಿ ಹರಡುತ್ತಿರುವುದರಿಂದ ಸಸ್ಯ ಸಂರಕ್ಷಣಾ ನಿಧಿ ಯೋಜನೆಯಡಿಯಲ್ಲಿ ಔಷಧಿ ಮತ್ತು ಎನ್.ಡಿ.ಆರ್.ಎಫ್ ಮತ್ತು ಎಸ್.ಡಿ.ಆರ್.ಎಫ್ ಅಡಿಯಲ್ಲಿ ಸಂಶೋಧನೆ ಮಾಡುವ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

http://kla.kar.nic.in/assembly/lob/lob.htm